All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

13.12.2024 13.10 pm

***************

ಮುಖ್ಯಾಂಶಗಳು:

- ಸಂವಿಧಾನ ಅಂಗೀಕಾರಕ್ಕೆ ೭೫ ವಸಂತಗಳು; ಸಂಸತ್ತಿನಲ್ಲಿ ಇಂದಿನಿಂದ ವಿಶೇಷ ಅಧಿವೇಶನ
- ಪ್ರಯಾಗರಾಜ್ ಮಹಾ ಕುಂಭಮೇಳ; ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ತ್ರಿವೇಣಿ ಸಂಗಮದಲ್ಲಿ ಪೂಜೆ ಸಲ್ಲಿಕೆ
- ೨೦೦೧ ರ ಸಂಸತ್ತಿನ ಮೇಲೆ ನಡೆದ ಭಯೋತ್ಪಾದಕ ದಾಳಿಗೆ ೨೩ ವರ್ಷ; ರಾಷ್ಟ್ರಪತಿ, ಉಪರಾಷ್ಟ್ರಪತಿ ಸೇರಿದಂತೆ ವಿವಿಧ ಗಣ್ಯರಿಂದ ಹುತಾತ್ಮರಿಗೆ ಗೌರವ ನಮನ
- ಎಚ್‌ಎಎಲ್ ಜೊತೆ ೧೨ ಸುಖೋಯ್ ವಿಮಾನ ಖರೀದಿ ಒಪ್ಪಂದಕ್ಕೆ ರಕ್ಷಣಾ ಸಚಿವಾಲಯ ಸಹಿ

***************

ದೇಶದಲ್ಲಿ ಸಂವಿಧಾನ ಅಂಗೀಕಾರವಾಗಿ ೭೫ ವರ್ಷ ತುಂಬಿದ ಹಿನ್ನೆಲೆಯಲ್ಲಿ ಸಂವಿಧಾನ ಕುರಿತು ಸಂಸತ್ತಿನಲ್ಲಿ ಎರಡು ದಿನಗಳ ಕಾಲ ವಿಶೇಷ ಅಧಿವೇಶನ ನಡೆಯಲಿದೆ.ಲೋಕಸಭೆಯಲ್ಲಿ ಇಂದು ಮಧ್ಯಾಹ್ನ ೧೨ ಗಂಟೆಯಿಂದ ಆರಂಭವಾಗಿ ಶನಿವಾರ ಸಂಜೆ ೫ ಗಂಟೆಗೆ ಚರ್ಚೆ ಮುಕ್ತಾಯವಾಗಲಿದೆ. ಅದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಲೋಕಸಭೆಯಲ್ಲಿ ಉತ್ತರ ನೀಡಲಿದ್ದಾರೆ.ರಾಜ್ಯಸಭೆಯಲ್ಲಿ ಸೋಮವಾರ ಮತ್ತು ಮಂಗಳವಾರ ಚರ್ಚೆ ನಡೆಯಲಿದೆ. ಉಭಯ ಸದನಗಳಲ್ಲಿ ತಲಾ ೧೨ ಗಂಟೆಗಳ ಕಾಲ ಚರ್ಚೆಗೆ ಸಮಯ ನಿಗದಿ ಪಡಿಸಲಾಗಿದೆ.ಲೋಕಸಭೆಯಲ್ಲಿ ಇಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚರ್ಚೆ ಆರಂಭಿಸಲಿದ್ದಾರೆ. ಸೋಮವಾರ ರಾಜ್ಯಸಭೆಯಲ್ಲಿ ಗೃಹ ಸಚಿವ ಅಮಿತ್ ಷಾ ಚರ್ಚೆ ನಡೆಸಲಿದ್ದಾರೆ.

***************

ಪ್ರಧಾನಮಂತ್ರಿ ನರೇಂದ್ರ ಮೋದಿ ಮಹಾ ಕುಂಭಮೇಳ ೨೦೨೫ರ ಹಿನ್ನಲೆಯಲ್ಲಿ ಮೂಲಸೌಕರ್ಯಗಳನ್ನು ಬಲಪಡಿಸುವ ಸಲುವಾಗಿ ಸುಮಾರು ೭ ಸಾವಿರ ಕೋಟಿ ರೂಪಾಯಿ ಮೌಲ್ಯದ ಅನೇಕ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲು ಉತ್ತರ ಪ್ರದೇಶದ ಪ್ರಯಾಗರಾಜ್‌ಗೆ ಇಂದು ಭೇಟಿ ನೀಡಿದ್ದಾರೆ. ಪ್ರಧಾನಮಂತ್ರಿ ಅವರ ಭೇಟಿಯ ಆರಂಭದ

ಭಾಗವಾಗಿ ಪವಿತ್ರ ಗಂಗಾ, ಯಮುನಾ ಮತ್ತು ಸರಸ್ವತಿ ನದಿಗಳ ತ್ರಿವೇಣಿ ಸಂಗಮದಲ್ಲಿ ಪೂಜೆ ನೆರವೇರಿಸಿದರು. ನಂತರ ಅವರು ಐತಿಹಾಸಿಕ ಅಕ್ಷಯ ವಟ ವೃಕ್ಷ, ಹನುಮಾನ್ ಮಂದಿರ ಮತ್ತು ಸರಸ್ವತಿ ಕೂಪ್‌ಗೆ ಭೇಟಿ ನೀಡುತ್ತಿದ್ದು, ಪೂಜೆ ನೆರವೇರಿಸಲಿದ್ದಾರೆ. ಈ ಯೋಜನೆಗಳಲ್ಲಿ ೧೦ ಹೊಸ ರಸ್ತೆ ಮೇಲ್ಸೇತುವೆಗಳು ಮತ್ತು ಫ್ಲೈಓವರ್‌ಗಳು, ಘಾಟ್‌ಗಳು, ಮತ್ತು ನದೀಪರದ ರಸ್ತೆಗಳನ್ನು ನಿರ್ಮಿಸುವ ಕಾರ್ಯಗಳನ್ನು ಒಳಗೊಂಡಿದೆ. ಇದು ಪ್ರಯಾಗರಾಜ್‌ನಲ್ಲಿ ಸಂಪರ್ಕವನ್ನು ಸುಲಭಗೊಳಿಸಲು ವಿನ್ಯಾಸಗೊಳಿಸಲಾಗಿದೆ.ಇದೇ ಸಮಯದಲ್ಲಿ ಅವರು ಸಂಸ್ಕರಿಸದ ಶೌಚ ನೀರು, ಗಂಗಾ ನದಿಗೆ ಹರಿಯುವುದನ್ನು ತಡೆಯುವ ಯೋಜನೆಗಳನ್ನು ಕೂಡ ಉದ್ಘಾಟಿಸಲಿದ್ದಾರೆ.ಅವರು ಮಹಾಕುಂಭ ಪ್ರದರ್ಶನ ನಡೆಯುವ ಸ್ಥಳಕ್ಕೆ ಭೇಟಿ ನೀಡಲಿದ್ದು, ೨೦೨೫ ಜನವರಿ ೧೩ ರಿಂದ ಫೆಬ್ರವರಿ ೨೬ ರವರೆಗೆ ನಡೆಯಲಿರುವ ಮುಂದಿನ ಕುಂಭಮೇಳದ ಸಿದ್ಧತೆಗಳನ್ನು ಪರಿಶೀಲಿಸಲಿದ್ದಾರೆ.

****************

ಕೆಲವು ದಿನಗಳಿಂದ ಭಾರತದಾದ್ಯಂತ ಬರುತ್ತಿರುವ ಸರಣಿ ಬಾಂಬ್ ಬೆದರಿಕೆ ಕರೆಗಳ ನಡುವೆ ಇದೀಗ ಭಾರತೀಯ ರಿಸರ್ವ್ ಬ್ಯಾಂಕಿಗೆ ಈ-ಮೇಲ್ ಮೂಲಕ ಬಾಂಬ್ ಬೆದರಿಕೆ ಬಂದಿದೆ. ರಷ್ಯನ್ ಭಾಷೆಯಲ್ಲಿ ಬರೆದಿರುವ ಈ-ಮೇಲ್ ಬ್ಯಾಂಕಿನ ಅಧಿಕೃತ ಜಾಲತಾಣಕ್ಕೆ ಕಳುಹಿಸಲಾಗಿದೆ. ಇದರ ಬೆನ್ನಲ್ಲೇ ಮುಂಬೈನ ಮಾತಾ ರಮಾಬಾಯಿ ಅಂಬೇಡ್ಕರ್ ಮಾರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ಬೆದರಿಕೆ ನೀಡಿದವರನ್ನು ಪತ್ತೆಹಚ್ಚುವ ಕಾರ್ಯ ಪ್ರಗತಿಯಲ್ಲಿದೆ.ಇಂದು ಬೆಳಗ್ಗೆ ದೆಹಲಿಯ ಒಟ್ಟು ೬ ಶಾಲೆಗಳಿಗೂ ಬೆದರಿಕೆ ಒಡ್ಡಿ ಹಲವು ಈ-ಮೇಲ್‌ಗಳು ಬಂದಿವೆ. ಇದರ ಹಿನ್ನೆಲೆಯಲ್ಲಿ ಶಾಲೆಯಲ್ಲಿದ್ದ ವಿದ್ಯಾರ್ಥಿಗಳನ್ನು ವಾಪಸ್ಸು ಕಳುಹಿಸಲಾಗಿದೆ. ಬಾಂಬ್ ಪತ್ತೆ ತಂಡದೊಂದಿಗೆ ಅಗ್ನಿಶಾಮಕ ಸಿಬ್ಬಂದಿ ಸ್ಥಳದಲ್ಲಿ ಬೀಡುಬಿಟ್ಟಿದ್ದಾರೆ.

****************

೨೦೦೧ ರಲ್ಲಿ, ಸಂಸತ್ತಿನ ಮೇಲೆ ನಡೆದ ಭಯೋತ್ಪಾದಕ ದಾಳಿಯ ಸಂದರ್ಭದಲ್ಲಿ ಅದರ ರಕ್ಷಣೆಗಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ವೀರರಿಗೆ, ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಶ್ರದ್ಧಾಂಜಲಿ ಸಲ್ಲಿಸಿದರು.ರಾಷ್ಟ್ರಪತಿಗಳು ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಭದ್ರತಾ ಸಿಬ್ಬಂದಿಯ ಧೈರ್ಯ ಮತ್ತು ನಿಸ್ವಾರ್ಥ ಸೇವೆಯನ್ನು ಸ್ಮರಿಸಿ, ದೇಶಕ್ಕೆ ಅವರು ನೀಡಿದ ಕೊಡುಗೆಯು ಸ್ಫೂರ್ತಿದಾಯಕವಾಗಿದೆ ಎಂದು ಹೇಳಿದ್ದಾರೆ.ರಾಷ್ಟ್ರವು ಭದ್ರತಾ ಸಿಬ್ಬಂದಿ ಮತ್ತು ಅವರ ಕುಟುಂಬಗಳೆಡೆಗೆ ಕೃತಜ್ಞತೆಯನ್ನು ಹೊಂದಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು. ಭಯೋತ್ಪಾದನೆಯನ್ನು ಎದುರಿಸಲು ಭಾರತದ ಅಚಲ ಸಂಕಲ್ಪವನ್ನು ರಾಷ್ಟ್ರಪತಿಗಳು ಪುನರುಚ್ಚರಿಸಿದರು.ಹುತಾತ್ಮರ ತ್ಯಾಗವು

ದೇಶಕ್ಕೆ ಶಾಶ್ವತವಾಗಿ ಸ್ಪೂರ್ತಿ ನೀಡುತ್ತದೆ, ಅವರ ಧೈರ್ಯ ಮತ್ತು ಸಮರ್ಪಣೆಗೆ ದೇಶ ಚಿರಋಣಿಯಾಗಿದೆ ಎಂದು ಪ್ರಧಾನಿ ಮೋದಿ ಹೇಳಿದರು.ಸಂಸತ್ತಿನ ಉಭಯ ಸದನಗಳಲ್ಲಿ ಭಯೋತ್ಪಾದಕ ದಾಳಿಯಲ್ಲಿ ಹುತಾತ್ಮರ ದಾಳಿಗೆ ಗೌರವ ನಮನ ಸಲ್ಲಿಸಿದರು. ಭದ್ರತಾ ಸಿಬ್ಬಂದಿಗೆ ಗೌರವ ಸೂಚಕವಾಗಿ ಉಭಯ ಸದನಗಳ ಸದಸ್ಯರು ಮೌನಾಚರಣೆ ಮಾಡಿದರು. ಈ ವೇಳೆ ಮಾತನಾಡಿದ ಲೋಕಸಭಾಧ್ಯಕ್ಷ ಓಂ ಬಿರ್ಲಾ ೨೦೦೧ರ ಇದೇ ದಿನದಂದು ನಮ್ಮ ಭದ್ರತಾ ಸಿಬ್ಬಂದಿ ತೋರಿದ ಧೈರ್ಯ, ಸಾಹಸದಿಂದಾಗಿ ಭಯೋತ್ಪಾದಕರ ಪ್ರಯತ್ನಗಳಿಗೆ ಕಡಿವಾಣ ಹಾಕಲಾಯಿತು. ಈ ದಾಳಿಯಲ್ಲಿ ಸಂಸತ್ತಿನ ಭದ್ರತಾ ಸೇವೆ, ದೆಹಲಿ ಪೊಲೀಸ್, ಸಿಆರ್‌ಪಿಎಫ್ ಪಡೆಯ ೮ ಜನ ಸಿಬ್ಬಂದಿ ಹಾಗೂ ಓರ್ವ ಸಿಪಿಡಬ್ಲ್ಯೂಡಿಯ ಸಿಬ್ಬಂದಿ ಹುತಾತ್ಮರಾಗಿದ್ದರು ಎಂದು ಸದನಕ್ಕೆ ತಿಳಿಸಿದರು. ರಾಜ್ಯಸಭೆಯಲ್ಲೂ ಹುತಾತ್ಮ ಸಿಬ್ಬಂದಿಗೆ ಗೌರವ ನಮನ ಸಲ್ಲಿಸಿದ ಬಳಿಕ ಮಾತನಾಡಿದ ಸಭಾಪತಿ ಜಗದೀಪ್ ಧನ್‌ಕರ್, ಭಯೋತ್ಪಾದಕರ ದುಷ್ಕೃತ್ಯವನ್ನು ತಡೆಯುವಲ್ಲಿ ನಮ್ಮ ಸಿಬ್ಬಂದಿ ತೋರಿದ ಶೌರ್ಯ ಪರಾಕ್ರಮವನ್ನು ಶ್ಲಾಘಿಸಿದರು.

ಧ್ವನಿ: ಜಗದೀಪ್ ಧನ್‌ಕರ್

ನಂತರ ರಾಜ್ಯಸಭೆಯ ಕಲಾಪ ಆರಂಭಗೊಂಡಾಗ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಸಭಾಪತಿ ಜಗದೀಪ್ ಧನ್‌ಕರ್ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವ ಕುರಿತಂತೆ ಮಾತಿನ ಚಕಮಕಿ ನಡೆದ ಪರಿಣಾಮ ಕಲಾಪವನ್ನು ನಾಳೆಗೆ ಮುಂದೂಡಲಾಯಿತು.

****************

ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್- HAL ಜೊತೆ 12, SU-30MKL ವಿಮಾನಗಳನ್ನು ಖರೀದಿಸಲು ರಕ್ಷಣಾ ಸಚಿವಾಲಯ ೧೩ ಸಾವಿರದ ೫೦೦ ಕೋಟಿ ರೂಪಾಯಿಗಳ ಒಪ್ಪಂದಕ್ಕೆ ಸಹಿ ಹಾಕಿದೆ. ವಿಮಾನದ ಪೂರೈಕೆಯು ಭಾರತೀಯ ವಾಯುಪಡೆ ಕಾರ್ಯಾಚರಣೆಯ ಸಾಮರ್ಥ್ಯವನ್ನು ಹೆಚ್ಚಿಸುವುದರ ಜೊತೆಗೆ ದೇಶದ ರಕ್ಷಣಾ ಸನ್ನದ್ಧತೆಯನ್ನು ಬಲಪಡಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ.ಭಾರತೀಯ ರಕ್ಷಣಾ ಉದ್ಯಮ ತಯಾರಿಸಬೇಕಾದ ಅನೇಕ ಘಟಕಗಳ ಸ್ವದೇಶೀಕರಣದಿಂದ ವಿಮಾನವು ಶೇಕಡ ೬೨.೬ರಷ್ಟು ಸ್ಥಳೀಯ ಉಪಕರಣಗಳನ್ನು ಒಳಗೊಂಡಿರುತ್ತದೆ ಎಂದು ಸಚಿವಾಲಯ ತಿಳಿಸಿದೆ.

****************

ತಮಿಳುನಾಡಿನ ದಿಂಡಿಗಲ್‌ನ ಖಾಸಗಿ ಆಸ್ಪತ್ರೆಯಲ್ಲಿ ನಿನ್ನೆ ಸಂಭವಿಸಿದ ಅಗ್ನಿ ಅವಘಡದಲ್ಲಿ ಒಬ್ಬ ಬಾಲಕ ಸೇರಿದಂತೆ ೬ ಮಂದಿ ಮೃತಪಟ್ಟಿದ್ದಾರೆ ಎಂದು ಪೊಲೀಸ್ ಮತ್ತು ಅಗ್ನಿಶಾಮಕ ದಳದ

ಅಧಿಕಾರಿಗಳು ತಿಳಿಸಿದ್ದಾರೆ. ಎಲ್ಲ ೬ ಮಂದಿ ಲಿಫ್ಟ್ ನಲ್ಲಿ ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಅವರನ್ನು ಕೂಡಲೇ ಆಸ್ಪತ್ರೆಗೆ ಸಾಗಿಸಲಾಯಿತಾದರೂ ಎಲ್ಲರೂ ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ. ಇದೇ ವೇಳೆ ಘಟನೆಯಲ್ಲಿ ಹಲವರು ಗಾಯಗೊಂಡಿದ್ದು, ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಬೆಂಕಿ ಅವಘಡದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ಮೂರು ಲಕ್ಷ ರೂಪಾಯಿ ಹಾಗೂ ತೀವ್ರವಾಗಿ ಗಾಯಗೊಂಡವರಿಗೆ ಒಂದು ಲಕ್ಷ ರೂಪಾಯಿ ಹಾಗೂ ಇತರೆ ಗಾಯಾಳುಗಳಿಗೆ ತಲಾ ಒಂದು ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಬೆಂಕಿ ಅವಘಡಕ್ಕೆ ಶಾರ್ಟ್ ಸರ್ಕ್ಯೂಟ್ ಕಾರಣ ಎನ್ನಲಾಗಿದ್ದು, ಪ್ರಕರಣ ದಾಖಲಿಸಿ, ತನಿಖೆಗೆ ಆದೇಶಿಸಲಾಗಿದೆ.

****************

ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ಸಾಫ್ಟ್‌ವೇರ್ ಆವೃತ್ತಿ ೨೦೨೪ ಕಾರ್ಯಕ್ರಮದ ಫಿನಾಲೆ ನಿನ್ನೆ ತಡರಾತ್ರಿ ಐಐಟಿ ಜಮ್ಮುವಿನಲ್ಲಿ ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ರಾಷ್ಟ್ರೀಯ ನಿರ್ಣಾಯಕ ಮಾಹಿತಿ ಮೂಲಸೌಕರ್ಯ ಸಂರಕ್ಷಣಾ ಕೇಂದ್ರ ಒಡ್ಡಿದ ನಿರ್ಣಾಯಕ ಸೈಬರ್ ಭದ್ರತೆ ಸವಾಲುಗಳನ್ನು ನಿಭಾಯಿಸಲು ಈ ಕಾರ್ಯಕ್ರಮವು, ದೇಶದ ಹಲವೆಡೆಗಳಿಂದ ಒಟ್ಟು ೨೮ ತಂಡಗಳನ್ನು ಒಟ್ಟುಗೂಡಿಸಿತು ಎಂದು ಆಕಾಶವಾಣಿ ಜಮ್ಮು ತನ್ನ ವರದಿಯಲ್ಲಿ ತಿಳಿಸಿದೆ. ಅದರಲ್ಲಿ ಒಟ್ಟು ಆರು ತಂಡಗಳು, ತಲಾ ೧ ಲಕ್ಷ ಬಹುಮಾನ ಮತ್ತು ಪ್ರಮಾಣಪತ್ರಗಳೊಂದಿಗೆ ವಿಜೇತರಾಗಿ ಹೊರಹೊಮ್ಮಿದವು. ಸಮಾರೋಪ ಸಮಾರಂಭದಲ್ಲಿ ಐಐಟಿ ಜಮ್ಮು ನಿರ್ದೇಶಕ, ಪ್ರೊಫೆಸರ್ ಮನೋಜ್ ಸಿಂಗ್ ಗೌರ್ ಪ್ರಶಸ್ತಿ ಪ್ರದಾನ ಮಾಡಿದರು. ಸ್ಪರ್ಧಾರ್ಥಿಗಳನ್ನು ಅವರ ನವೀನ ಪರಿಹಾರಗಳಿಗಾಗಿ ಪ್ರೊಫೆಸರ್ ಗೌರ್ ಶ್ಲಾಘಿಸಿದರು. ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ರ ಅಡಿಯಲ್ಲಿ ತಾಂತ್ರಿಕವಾಗಿ ಮುಂದುವರಿದ, ಭವಿಷ್ಯದ ಭಾರತ ದೃಷ್ಟಿಕೋನಕ್ಕೆ ಅನುಗುಣವಾಗಿ ತಾಂತ್ರಿಕ ಪ್ರಗತಿಯನ್ನು ಸಾಧಿಸುವಲ್ಲಿ ಅಂತಹ ಉಪಕ್ರಮಗಳ ಪ್ರಾಮುಖ್ಯತೆಯನ್ನು ಅವರು ಎತ್ತಿ ಹಿಡಿದರು. ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ೨೦೨೪ರ ನಾಗ್ಪುರದ ೭ನೇ ಆವೃತ್ತಿಯ ಗ್ರ್ಯಾಂಡ್ ಫಿನಾಲೆ ನಿನ್ನೆ ತಡರಾತ್ರಿ ಜಿ.ಎಚ್. ರೈಸೋನಿ ಕಾಲೇಜ್ ಆಫ್ ಇಂಜಿನಿಯರಿಂಗ್‌ನಲ್ಲಿ ಮುಕ್ತಾಯಗೊಂಡಿತು. ನೋಡಲ್ ಕೇಂದ್ರದಲ್ಲಿ ೪ ತಂಡಗಳು ಅತ್ಯುತ್ತಮ ಪ್ರದರ್ಶನ ನೀಡಿದವು. ಎರಡು ದಿನಗಳ ಕಾರ್ಯಕ್ರಮವು ಯುವ ಮನಸ್ಸುಗಳಿಂದ ನವೀನ ಆಲೋಚನೆಗಳು ಮತ್ತು ಪರಿಹಾರಗಳಿಗೆ ಸಾಕ್ಷಿಯಾಯಿತು. ಮೈಸೂರಿನ ಎನ್ಐಇ ಕಾಲೇಜಿನಲ್ಲಿ ನಡೆದ ಹ್ಯಾಕಥಾನ್ ಗ್ರ್ಯಾಂಡ್ ಫಿನಾಲೆಯಲ್ಲಿ ಭಾಗವಹಿಸಿದ ಅಹಮದಾಬಾದಿನ ವಿದ್ಯಾರ್ಥಿ ಸ್ಪರ್ಷ್ ಗುಪ್ತ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

****************

ಭಾರತದ ಗ್ರ್ಯಾಂಡ್ ಮಾಸ್ಟರ್ ದೊಮ್ಮರಾಜು ಗುಕೇಶ್ ವಿಶ್ವದ ಅತ್ಯಂತ ಕಿರಿಯ ಚೆಸ್ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ. ತಮ್ಮ ೧೮ನೇ ವಯಸ್ಸಿನಲ್ಲೇ ಗುಕೇಶ್, ಸಿಂಗಾಪುರದಲ್ಲಿ ನಿನ್ನೆ ನಡೆದ ೧೮ ನೇ ಫಿಡೆ ವಿಶ್ವ ಚೆಸ್ ಚಾಂಪಿಯನ್‌ಶಿಪ್‌ನ ೧೪ ನೇ ಮತ್ತು ಅಂತಿಮ ಪಂದ್ಯದಲ್ಲಿ ಚೀನಾದ ಡಿಂಗ್ ಲಿರೆನ್ ಅವರನ್ನು ಸೋಲಿಸಿ ಈ ಕೀರ್ತಿಗೆ ಪಾತ್ರರಾಗಿದ್ದಾರೆ.ಚ್ಯಾಂಪಿಯನ್‌ಶಿಪ್ ನಲ್ಲಿ ಒಟ್ಟು ೭.೫ ಅಂಕಗಳನ್ನು ಗಳಿಸುವ ಮೂಲಕ ಗುಕೇಶ್ ಚ್ಯಾಂಪಿಯನ್ ಪಟ್ಟ ಮುಡಿಗೇರಿಸಿಕೊಂಡಿದ್ದಾರೆ. ಕಳೆದ ಆವೃತ್ತಿಯ ಚ್ಯಾಂಪಿಯನ್ ಆಗಿದ್ದ ಅವರ ಎದುರಾಳಿ ಡಿಂಗ್ ಲಿರೆನ್ ೬.೫ ಅಂಕಗಳನ್ನು ಪಡೆದು ಸೋಲೊಪ್ಪಿಕೊಂಡರು.

********ಮುಕ್ತಾಯ********